ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯ ವಿತರಣೆ

166 (533) ಡಾ. ಶರಣ ಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ)) :– ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯ ವಿತರಣೆಯನ್ನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಸ್ಥಳೀಯ ಸಂಘ ಸಂಸ್ಥೆಗಳಿಂದ ವಿತರಣೆ ಮಾಡದೆ ಆದೇಶ ಉಲ್ಲಂಘನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇಲಾಖೆ ಆಹಾರ ಧಾನ್ಯ ವಿತರಣೆಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡುತ್ತಿರುವುದು ಹಾಗೂ ಪಾರದರ್ಶಕ ಕಾಯಿದೆ ಉಲ್ಲಂಘನೆ ಮಾಡುತ್ತಿರುವುದಕ್ಕೆ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮವೇನು?

ಶ್ರೀ ಸಿ.ಸಿ. ಪಾಟೀಲ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು):–

(ಅ) ಸರ್ವೋಚ್ಚ ನ್ಯಾಯಾಲಯದ ನಿರ್ದೇಶದನ್ವಯ ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯಗಳನ್ನು ಸ್ವಸಹಾಯ ಸಂಘದ ಸದಸ್ಯರಿಂದ ರಚಿಸಿ ನೋಂದಾಯಿಸಿದ 137 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನ ಮತ್ತು ತರಬೇತಿ ಕೇಂದ್ರಗಳ ಮೂಲಕ ಸರಬರಾಜು ಮಾಡಲಾಗುತ್ತಿದೆ. ನ್ಯಾಯಾಲಯ ಆದೇಶ ಉಲ್ಲಂಘನೆಯಾಗಿರುವುದಿಲ್ಲ.

(ಆ) ಅಂಗನವಾಡಿ ಕೇಂದ್ರಗಳಲ್ಲಿ ನೀಡುವ ಆಹಾರ ಪದಾರ್ಥಗಳನ್ನು ಸುಪ್ರೀಂ ಕೋರ್ಟ್ ನಿರ್ದೇಶದನ್ವಯ ಮಹಿಳಾ ಸ್ವಸಹಾಯ ಸಂಘಗಳಿಂದ ರಚಿತವಾದ 137 ನೋಂದಾಯಿತ ಮಹಿಳಾ ಪೂರಕ ಪೌಷ್ಟಿಕ ಆಹಾರ ಘಟಕಗಳಿಂದ ಸಿದ್ಧಪಡಿಸಿ ನೀಡಲಾಗುತ್ತಿದೆ. ಈ ಘಟಕಗಳಲ್ಲಿ ಸ್ವಸಹಾಯ ಸಂಘದ ಮಹಿಳೆಯರು ಸದಸ್ಯರಾಗಿರುತ್ತಾರೆ. ಉಚ್ಚನ್ಯಾಯಾಲಯದ ಆದೇಶದ ಉಲ್ಲಂಘನೆಯಾಗಿರುವುದಿಲ್ಲ.

ರಾಜ್ಯದಲ್ಲಿ ಮನೆ ಮಂಜೂರಾತಿ

170 (519) ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ)) :– ಮಾನ್ಯ ವಸತಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–